RNU AIR DHARWAD

SEPTEMBER 17, 2025

**AKASHAVANI - DHARWAD**

**PRADESH SAMACHARA (KANNADA) 12 PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಕಲ್ಯಾಣ ಕರ್ನಾಟಕ ಉತ್ಸವದ ಹಿನ್ನೆಲೆ,** ಇಂದು ಕಲಬುರಗಿ ನಗರದ ಪ್ರಧಾನ ವೃತ್ತದಲ್ಲಿರುವ ಉಕ್ಕಿನ ಮನುಷ್ಯ ಸರ್ದಾರ ವಲ್ಲಭಭಾಯಿ ಪಟೇಲ್ ಅವರ ಪ್ರತಿಮೆಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಲಾರ್ಪಣೆ ಮಾಡಿ, ಹೈದರಾಬಾದ್ ಕರ್ನಾಟಕ ವಿಮೋಚನೆಯ ಹರಿಕಾರರಿಗೆ ಗೌರವ ನಮನ ಸಲ್ಲಿಸಿದರು. ಈ ಸಂದರ್ಭ ಲಕ್ಷ್ಮಣ ದಸ್ತಿ ನೇತೃತ್ವದ, ಕಲ್ಯಾಣ ಕರ್ನಾಟಕ ಭಾಗದ ಹೋರಾಟಗಾರರು, ನೂತನ ಸಚಿವಾಲಯ ಸೃಜಿಸಿರುವುದನ್ನು ಪ್ರಶಂಸಿಸಿ, ಮುಖ್ಯಮಂತ್ರಿ ಅವರಿಗೆ ಅಭಿನಂದನಾ ಪತ್ರ ನೀಡಿ ಗೌರವಿಸಿದರು.

<><><>

**ಕಲಬುರಗಿ ನಗರ ಕ್ರೀಡಾಂಗಣದಲ್ಲಿ** ಆಯೋಜಿತ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿದರು.

<><><>

**ರಾಜ್ಯ ಸರ್ಕಾರ ಪ್ರತ್ಯೇಕವಾಗಿ** ಕಲ್ಯಾಣ ಕರ್ನಾಟಕ ಅಭಿವೃದ್ಧಿ ಸಚಿವಾಲಯಕ್ಕೆ ಅನುಮೋದನೆ ನೀಡಿದ್ದು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಕಾರ್ಯದರ್ಶಿ, ಇಲಾಖೆಯ ನೂತನ ಕಾರ್ಯದರ್ಶಿಯಾಗಿ, ಮಂಡಳಿಯ ಎಲ್ಲ ಪದಾಧಿಕಾರಿಗಳು ಅನುಚ್ಛೇಧ 371 –ಜೆ ವಿಷಯಗಳನ್ನು ನಿರ್ವಹಿಸುವಂತೆ ಆದೇಶಿಸಲಾಗಿದೆ. ಹೊಸ ಸಚಿವಾಲಯ ರಚನೆಗೆ, ಕಾರಣರಾದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಸೇರಿದಂತೆ ಸಚಿವ ಸಂಪುಟದ ಸಹೋದ್ಯೋಗಿಗಳಿಗೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವರಾದ ಪ್ರಿಯಾಂಕ್ ಖರ್ಗೆ ತಮ್ಮ ಎಕ್ಸ್ ಖಾತೆ ಮೂಲಕ ಕೃತಜ್ಞತೆ ಸಲ್ಲಿಸಿದ್ದಾರೆ.

<><><>

**ಬಳ್ಳಾರಿ ನಗರದ, ಮುನಿಸಿಪಲ್ ಹೈಸ್ಕೂಲ್** ಮೈದಾನದಲ್ಲಿ ಆಯೋಜಿತ, ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಪಾಲ್ಗೊಂಡ, ಪೌರಾಡಳಿತ ಖಾತೆ ಸಚಿವರಾದ ರಹೀಂ ಖಾನ್ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಸರ್ದಾರ ವಲ್ಲಭಭಾಯಿ ಪಟೇಲ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

<><><>

**ಕೊಪ್ಪಳ ನಗರದಲ್ಲಿ ಆಯೋಜಿತ,** 78 ನೇ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಪಾಲ್ಗೊಂಡು, ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿದರು.

<><><>

**ಕಲ್ಯಾಣ ಕರ್ನಾಟಕ ಭಾಗವಾದ** ವಿಜಯನಗರ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ಎಲ್ಲರೂ ಒಟ್ಟಾಗಿ ಶ್ರಮಿಸೋಣ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಕರೆ ನೀಡಿದರು. ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ,** ಅವರ 75 ನೇ ಜನ್ಮ ದಿನಾಚರಣೆ ಹಿನ್ನೆಲೆ, ರಾಷ್ಟ್ರಪತಿ ದ್ರೌಪದಿ ಮುರ್ಮು ಸೇರಿದಂತೆ ಗಣ್ಯರು ಪ್ರಧಾನಿಯವರಿಗೆ ಜನ್ಮ ದಿನದ ಶುಭಾಶಯಗಳನ್ನು ಕೋರಿದ್ದಾರೆ. ಇಂದಿನಿಂದ ಮಹಾತ್ಮ ಗಾಂಧೀಜಿ ಹಾಗೂ ಲಾಲ ಬಹಾದ್ದೂರ ಶಾಸ್ತ್ರಿ ಅವರ ಜಯಂತಿ, ಅಕ್ಟೋಬರ್ 2 ರವರೆಗೆ, ನಾಡಿನಾದ್ಯಂತ ಸೇವಾ ಪರ್ವವನ್ನು ಆಯೋಜಿಸಲಾಗಿದೆ. ವಿಜಯನಗರ ಜಿಲ್ಲೆಯಲ್ಲಿ ಆಯೋಜಿತ, ಸೇವಾ ಪಾಕ್ಷಿಕ– ಸೇವಾ ಪರ್ವ ಅಭಿಯಾನದ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಬಿಜೆಪಿ ಜಿಲ್ಲಾಧ್ಯಕ್ಷರಾದ ಸಂಜೀವ ರೆಡ್ಡಿ.

<><><>

**ಧಾರವಾಡ ಜಿಲ್ಲೆ ಕಲಘಟಗಿ ತಾಲೂಕು** ಆಸ್ಪತ್ರೆಯಲ್ಲಿ, ಸೇವಾ ಪರ್ವದ ಅಂಗವಾಗಿ ಇಂದು ರಕ್ತದಾನ ಶಿಬಿರ, ದಿವ್ಯಾಂಗರಿಗೆ, ಹಿರಿಯ ನಾಗರಿಕರಿಗೆ ಉಚಿತವಾಗಿ ಸಹಾಯಧನ ಹಾಗೂ ಉಪಕರಣಗಳ ವಿತರಣೆ, ಪೌರ ಕಾರ್ಮಿಕರಿಗೆ, ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಆಯೋಜಿತವಾಗಿದೆ.

<><><>

**ಹುಬ್ಬಳ್ಳಿ ಸಿದ್ದಾರೂಢ ಸ್ವಾಮೀಜಿ ರೇಲ್ವೆ** ನಿಲ್ದಾಣದಲ್ಲಿ, ನೈರುತ್ಯ ರೇಲ್ವೆ ವಲಯ ಆಯೋಜಿಸಿದ್ದ ಸ್ವಚ್ಛ ಭಾರತ್ ಅಭಿಯಾನ ಕಾರ್ಯಕ್ರಮದಲ್ಲಿ ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ಪಾಲ್ಗೊಂಡರು. ಸ್ವಚ್ಛತೆಯೇ ಸೇವೆ ಸಂಕಲ್ಪದೊಂದಿಗೆ ಜರುಗಿದ ಕಾರ್ಯಕ್ರಮದಲ್ಲಿ ಶಾಸಕ ಮಹೇಶ್ ಟೆಂಗಿನಕಾಯಿ, ಪಾಲಿಕೆ ಸದಸ್ಯರು, ರೇಲ್ವೆ ಸಿಬ್ಬಂದಿ ಹಾಗೂ ಪೌರ ಕಾರ್ಮಿಕರು ಭಾಗಿಯಾದರು.

<><><>

**ಕಬುರಗಿ ಜಿಲ್ಲೆ ಗ್ರಾಮೀಣ** ಪ್ರದೇಶದ ಜನರಲ್ಲಿ, ನೈರ್ಮಲ್ಯ ಹಾಗೂ ಶುಚಿತ್ವ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಸ್ವಚ್ಛತಾ ಹಿ ಸೇವಾ ಪಾಕ್ಷಿಕ ಆಂದೋಲನವನ್ನು ಜಿಲ್ಲೆಯಾದ್ಯಂತ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಸಿಇಒ ಭಂವರ್ ಸಿಂಗ್ ಮೀನಾ ತಿಳಿಸಿದ್ದಾರೆ.

<><><>

**ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ**, ಉದ್ದು, ಹೆಸರು, ಸೊಯಾಬೀನ್, ಸೂರ್ಯಕಾಂತಿ ಸೇರಿದಂತೆ ಇತರೆ ಕೃಷಿ ಉತ್ಪನ್ನಗಳ ಖರೀದಿಗೆ ತಕ್ಷಣ ಅನುಮೋದನೆ ನೀಡುವಂತೆ ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಹೊಸದಿಲ್ಲಿಯಲ್ಲಿ ಆಯೋಜಿತ, ರಾಷ್ಟ್ರೀಯ ರಬಿ ಅಭಿಯಾನ್ ಸಮ್ಮೇಳನದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಎಂ.ಎಸ್.ಪಿ ಅನುಮೋದನೆ ನಿಟ್ಟಿನಲ್ಲಿ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಖಾತೆ ಸಚಿವರಾದ, ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಮನವಿ ಸಲ್ಲಿಸಿದರು. ಮಂಡ್ಯದಲ್ಲಿ ಆರಂಭವಾದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಐಸಿಎಆರ್ ಮಾನ್ಯತೆ ಹಾಗೂ ಅಗತ್ಯ ಅನುದಾನ ನೀಡುವಂತೆ ಕೋರಿದರು.

<><><>